**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಚಿದಾನಂದ ಎಂ. ಗೌಡ ಇವರು ನಿಯಮ–330 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ವಿಷಯ:**

ರಾಜ್ಯದ ಸರ್ಕಾರಿ/ಅನುದಾನಿತ ಶಾಲೆಗಳ 8,9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ದೂರದ ಹಳ್ಳಿಗಳಿಂದ ಶಾಲೆಗೆ ಬರಲು ಅನುಕೂಲವಾಗುವಂತೆ ಬೈಸಿಕಲ್/ಸ್ಕೂಲ್ ಬಸ್ ಸೌಲಭ್ಯ ಒದಗಿಸುವ ಕುರಿತು ಮಾನ್ಯ ಶಿಕ್ಷಣ ಸಚಿವರಲ್ಲಿ ನಿಯಮ –330ರಡಿ ಪ್ರಸ್ತಾಪಿಸುತ್ತೇನೆ.

**ಉತ್ತರ:**

ರಾಜ್ಯದ ಸರ್ಕಾರಿ/ಅನುದಾನಿತ ಶಾಲೆಗಳ 8,9 ಹಾಗೂ 10ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗೆ ಬರಲು ಅನುಕೂಲವಾಗುವಂತೆ ಬೈಸಿಕಲ್/ಸ್ಕೂಲ್ ಬಸ್ ಸೌಲಭ್ಯ ಒದಗಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ.

ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಶಾಲೆಗೆ ಬರಲು ಕೇಂದ್ರ ಸರ್ಕಾರದ ಅನುಮೋದಿತ ಅನುದಾನದಿಂದ 1 ಕಿ.ಮೀ ವ್ಯಾಪ್ತಿಯಲ್ಲಿ ಕಿರಿಯ ಪ್ರಾಥಮಿಕ ಶಾಲೆಗಳಿಲ್ಲದ, 3 ಕಿ.ಮೀ ವ್ಯಾಪ್ತಿಯಲ್ಲಿನ ಹಿರಿಯ ಪ್ರಾಥಮಿಕ ಶಾಲೆಗಳಿಲ್ಲದ ಮತ್ತು 5 ಕಿ.ಮೀ ವ್ಯಾಪ್ತಿಯಲ್ಲಿ ಪ್ರೌಢ ಶಾಲೆಗಳಿಲ್ಲದ ವಿದ್ಯಾರ್ಥಿಗಳಿಗೆ ಶಾಲೆಗೆ ಹೋಗಿ ಬರಲು ಪ್ರತಿ ತಿಂಗಳು ರೂ.600/– ರಂತೆ ಆರು ತಿಂಗಳಿಗೆ ಸಾರಿಗೆ ಭತ್ಯೆ ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಶಾಲೆಗೆ ಬರಲು ಸರ್ಕಾರಿ ಬಸ್ಸುಗಳಲ್ಲಿ ಪ್ರಯಾಣಿಸಲು ಉಚಿತವಾಗಿ ಬಸ್‌ಪಾಸ್ ವಿತರಿಸಲಾಗುತ್ತಿದೆ.

ಸಂಖ್ಯೆ: ಇಪಿ 69 ಎಂಪಿಇ 2023

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು